# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 09.05.2025ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2025ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು :**

| | | | |
|---|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಕವಿತಾ ಕೆ.ಆರ್.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಪರಿಣಿತ<br>ಡೀನರು, ಕಲಾ ನಿಕಾಯ | ಸದಸ್ಯರು | |
| 4. | ಡಾ. ಎಸ್.ಬಿ.ಎಂ. ಪ್ರಸನ್ನ | ಸದಸ್ಯರು | |
| 5. | ಡಾ. ಕೆ.ಸಿ. ಮಹದೇಶ | ಸದಸ್ಯರು | |
| 6. | ಡಾ. ಶಂಕರಮೂರ್ತಿ ಎಚ್.ಕೆ. | ಸದಸ್ಯರು | |
| 7. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 8. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು | |
| 9. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು | |
| 10. | ಶ್ರೀ ರಘುರಾಜ್ | ಸದಸ್ಯರು | |
| 11. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 12. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು | |
| 13. | ಪ್ರೊ. ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 14. | ಡಾ. ಸಂದೇಶ್ ಕೆ.ಎಸ್.<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು | ಆನ್ ಲೈನ್ ಮೂಲಕ |
| 15. | ಪ್ರೊ. ಸಂಗಪ್ಪ ವೈ.<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು | |
| 16. | ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ | |

**ಅನುಪಸ್ಥಿತರು:**

| | | |
|---|---|---|
| 1. | ಶ್ರೀಮತಿ ಪುಷ್ಪಲತಾ ಹೆಚ್.ಕೆ.<br>ಪ್ರಾಂಶುಪಾಲರು, ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,<br>(**ಶಾಲಾ ಶಿಕ್ಷಣ ಮತ್ತು ಸಾಕ್ಷರತೆ** ಆಯುಕ್ತರ ಪರವಾಗಿ) | ಸದಸ್ಯರು |

## ಪ್ರಾರಂಭಿಕ

**ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.**

## ಪ್ರಾಸ್ತಾವಿಕ

**ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.**

**ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತರಲಾಯಿತು.**

1. ಕಾಲೇಜು ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳನ್ನು Ditigal Format ನಲ್ಲಿ ದಾಖಲಿಸಲು ಹಾಗೂ ವೃತ್ತಿ ಕೌಶಲ್ಯ ಹೆಚ್ಚಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳ Curriculam ನಲ್ಲಿ ಅಳವಡಿಸಿಕೊಂಡು ವಿಶೇಷ ತರಬೇತಿ ನೀಡುವ ಬಗ್ಗೆ ಪ್ರತಿಷ್ಠಿತ ಸಂಸ್ಥೆಯೊಂದು ಮುಂದೆ ಬಂದಿರುತ್ತದೆ. ಈ ಬಗ್ಗೆ ಪ್ರಾಂಶುಪಾಲರುಗಳ ಸಭೆಯಲ್ಲಿ ಚರ್ಚೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲಿರುವುದಾಗಿ ಸಭೆಗೆ ತಿಳಿಸಲಾಯಿತು.

2. ಕೇಂದ್ರ ಸರ್ಕಾರದ ದೀನ್ ದಯಾಳ್ ಕೌಶಲ್ಯ ಅಭಿವೃದ್ಧಿ ಯೋಜನೆಯನ್ವಯ ಕಾಲೇಜು ವಿದ್ಯಾರ್ಥಿಗಳ ಕೌಶಲ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿಯೂ ಪ್ರಾಂಶುಪಾಲರುಗಳಲ್ಲಿ ಚರ್ಚಿಸಲಾಗುವುದು ಎಂದು ಸಭೆಗೆ ತಿಳಿಸಲಾಯಿತು.

### I. ನಡವಳಿಗಳ ದೃಢೀಕರಣ

**1) ದಿನಾಂಕ 12.03.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

**ತಿದ್ದುಪಡಿ ನಿರ್ಣಯ:** ಕಾರ್ಯಸೂಚಿ ಸಂಖ್ಯೆ ಸಿಂಡಿಕೇಟು:ಸಾ.ಸ.2:44(2025) ಕ್ಕೆ ಸಂಬಂಧಿಸಿದಂತೆ, ಟೆಂಡರ್ ಸಮಿತಿ ಹಾಗೂ ಟೆಂಡರ್ ಪರಿಶೀಲನಾ ಸಮಿತಿಯ ಕಾರ್ಯವ್ಯಾಪ್ತಿಯಲ್ಲಿ ಎಲ್-1 ಮತ್ತು ಎಲ್-2 ಪರಿಗಣಿಸುವ ನಿಟ್ಟಿನಲ್ಲಿ ಕೆ.ಟಿ.ಪಿ.ಪಿ. ಆಕ್ಟ್ ಪ್ರಕಾರ ಕ್ರಮಕೈಗೊಳ್ಳಬೇಕೆಂದು ಮಾನ್ಯ ಸಿಂಡಿಕೇಟ್ ಸದಸ್ಯರಾದ ಶ್ರೀ ಮಹಮ್ಮದ್ ಸವಾದ್ ರವರು ಲಿಖಿತ ಪತ್ರವನ್ನು ನೀಡಿರುತ್ತಾರೆ. ಈ ಬಗ್ಗೆ ಈಗಾಗಲೇ ನಿರ್ಣಯವಾಗಿರುವುದರಿಂದ ಮುಂದಿನ ಸಿಂಡಿಕೇಟ್ ಸಭೆಯಲ್ಲಿ ಪ್ರತ್ಯೇಕ ಕಾರ್ಯಸೂಚಿಯನ್ನು ಮಂಡಿಸಿ ಚರ್ಚಿಸಲು ನಿರ್ಣಯಿಸಲಾಯಿತು.

- ಉಳಿದಂತೆ ದೃಢೀಕರಿಸಲಾಯಿತು -

**2) 43ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ, ದಿನಾಂಕ 28.03.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಯ ದೃಢೀಕರಣ.**

- ದೃಢೀಕರಿಸಲಾಯಿತು -

**II. ಅನುಸರಣಾ ವರದಿಯ ಅನುಮೋದನೆ**

**1) ದಿನಾಂಕ 18.02.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

**ತಿದ್ದುಪಡಿ ನಿರ್ಣಯ:** ಕಾರ್ಯಸೂಚಿ ಸಂಖ್ಯೆ ಹಣಕಾಸು:ವಿ.ಸ.:1:1 (2025) ಕ್ಕೆ ಸಂಬಂಧಿಸಿ, ಉಡುಪಿ ಜಿಲ್ಲೆ ಕಾಪು ತಾಲೂಕಿನ ಬೆಳಪುವಿನಲ್ಲಿ ನಿರ್ಮಿಸಲಾಗುತ್ತಿರುವ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರಕ್ಕೆ ಬಿಡುಗಡೆಯಾದ ಅನುದಾನದಲ್ಲಿ ರೂ. 7.50 ಕೋಟಿಯನ್ನು ಅನ್ಯ ಉದ್ದೇಶಕ್ಕೆ ವರ್ಗಾವಣೆ ಮಾಡಿದ ಕುರಿತು ತನಿಖೆ ನಡೆಸಲು ಈ ಕೆಳಗಿನ ಸಿಂಡಿಕೇಟು ಸದಸ್ಯರುಗಳ ಸಮಿತಿಯನ್ನು ರಚಿಸಲು ನಿರ್ಣಯಿಸಲಾಯಿತು.

1) ಡಾ.ಎಸ್.ಬಿ.ಎಂ. ಪ್ರಸನ್ನ - ಅಧ್ಯಕ್ಷರು
2) ಡಾ. ಕೆ.ಸಿ. ಮಹದೇಶ - ಸದಸ್ಯರು
3) ಶ್ರೀ ಸುರೇಶ್ ಬಿ. ನಾವೂರು - ಸದಸ್ಯರು
4) ಶ್ರೀ ರಘುರಾಜ್ - ಸದಸ್ಯರು
5) ಶ್ರೀಮತಿ ಜೂಡಿತ್ ಮೆಂಡೋನ್ಸ - ಸದಸ್ಯರು

**- ಉಳಿದಂತೆ ಅನುಮೋದಿಸಲಾಯಿತು –**

**III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:1(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟ ಜಮೀನಿನಲ್ಲಿ ತಾಲೂಕು ಮಟ್ಟದ ಕಚೇರಿಗಳ ನಿರ್ಮಾಣಕ್ಕೆ ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನ ಸಭೆ ಇವರು ಸಲ್ಲಿಸಿರುವ ಪ್ರಸ್ತಾವನೆಯ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಹಾಗೂ ಸರ್ಕಾರದ ಸೂಚನೆಗೊಳಪಟ್ಟು ಸ್ಥಳವನ್ನು ಗುರುತಿಸಿ ಎರಡು ಎಕರೆ ಜಮೀನನ್ನು ಭೂಮೌಲ್ಯ ಪಾವತಿಸುವ ಷರತ್ತಿಗೊಳಪಟ್ಟು, ಉಳ್ಳಾಲ ತಾಲೂಕು ಕಛೇರಿ ನಿರ್ಮಿಸುವ ಉದ್ದೇಶಕ್ಕೆ ನೀಡಲು ಸಿಂಡಿಕೇಟು ತೀರ್ಮಾನಿಸಿ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:2(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟ ಸರ್ವೇ ನಂಬ್ರ 113 ರಲ್ಲಿ 2.50 ಎಕರೆ ಜಮೀನನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ಮಂಜೂರು ಮಾಡುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ನಿಗದಿತ ಭೂಮೌಲ್ಯವನ್ನು ವಿಶ್ವವಿದ್ಯಾನಿಲಯಕ್ಕೆ ಪಾವತಿಸುವಂತೆ ಕೆಪಿಟಿಸಿಎಲ್‌ಗೆ ನಿರ್ದೇಶನ ನೀಡುವ ಷರತ್ತಿಗೊಳಪಟ್ಟು ಈಗಾಗಲೇ ನೀಡಲಾಗಿರುವ ಒಂದೂವರೆ ಎಕರೆ ಜೊತೆಗೆ, ಹೆಚ್ಚುವರಿಯಾಗಿ ಒಂದು ಎಕರೆ ಸೇರಿಸಿ ಒಟ್ಟು 2.50 ಎಕರೆ ಜಮೀನನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ನೀಡಲು ಸಿಂಡಿಕೇಟು ತೀರ್ಮಾನಿಸಿ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಣಯಿಸಲಾಯಿತು

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:3(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಮಹಿಳಾ ಅತಿಥಿ ಉಪನ್ಯಾಸಕರಿಗೆ ವೇತನ ಸಹಿತ ಮಾತೃತ್ವ ರಜೆ ಸೌಲಭ್ಯ ನೀಡಿರುವ ನಿರ್ಣಯವನ್ನು ಮರುಪರಿಶೀಲಿಸುವ ಬಗ್ಗೆ.

**ನಿರ್ಣಯ:** ಮಹಿಳಾ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ವೇತನ ಸಹಿತ ಮಾತೃತ್ವ ರಜೆ ಸೌಲಭ್ಯವನ್ನು ಹಿಂಪಡೆಯಲು ನಿರ್ಣಯಿಸಲಾಯಿತು.

ಈ ನಿರ್ಣಯದ ಬಗ್ಗೆ ಡಾ.ಎಸ್.ಬಿ.ಎಂ ಪ್ರಸನ್ನ ಮತ್ತು ಡಾ.ಕೆ.ಸಿ.ಮಹದೇಶ ಅವರು ಅಸಮ್ಮತಿಯನ್ನು ಲಿಖಿತವಾಗಿ ಸಲ್ಲಿಸಿ, ದಿನಾಂಕ 15.09.2022ರ ಸಿಂಡಿಕೇಟು ನಿರ್ಣಯದಂತೆ ಸದರಿ ಸೌಲಭ್ಯವನ್ನು ಮುಂದುವರಿಸುವಂತೆ ಕೋರಿರುತ್ತಾರೆ ಹಾಗೂ 2022 ರಿಂದ ಮಾತೃತ್ವ ರಜೆ ಪಡೆದಿರುವ ಮಹಿಳಾ ಅತಿಥಿ ಉಪನ್ಯಾಸಕರ ಅಂಕಿ ಅಂಶವನ್ನು ಸದರಿಯವರಿಗೆ ನೀಡುವಂತೆ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.3:4(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟ ಬೆಳಪು ಗ್ರಾಮದಲ್ಲಿ ನಿರ್ಮಿಸಲಾಗುತ್ತಿರುವ ಅತ್ಯಾಧುನಿಕ ಸಂಶೋಧನಾ ಕೇಂದ್ರದ ಕಾಮಗಾರಿಯ ವಾಸ್ತುಶಿಲ್ಪಿ ಸಲಹೆಗಾರ ಶ್ರೀ ಎನ್.ಎನ್.ಭಟ್ ಇವರಿಗೆ 3ನೇ ಭಾಗಶ: ಬಿಲ್ಲು ಪಾವತಿಸುವ ಬಗ್ಗೆ.

**ನಿರ್ಣಯ:** ವಾಸ್ತುಶಿಲ್ಪಿ ಸಲಹೆಗಾರರ ಬಿಲ್ಲನ್ನು ಈ ಹಿಂದಿನಂತೆ ಪಾವತಿಸಲು ನಿರ್ಣಯಿಸಲಾಯಿತು.

ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಎಸ್.ಬಿ.ಎಂ. ಪ್ರಸನ್ನ ಮತ್ತು ಡಾ.ಕೆ.ಸಿ. ಮಹದೇಶ ಇವರು ಸದರಿ ಪಾವತಿಯನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಭರಿಸುವುದೇ ಅಥವಾ KHBಯವರಿಗೆ ಪಾವತಿಸಲಿರುವ ಬಿಲ್ಲಿನಲ್ಲಿ ಭರಿಸುವುದೇ ಎಂಬ ಬಗ್ಗೆ ಸದರಿಯವರು ಕೇಳಿರುವ ಸ್ಪಷ್ಟನೆಗೆ ಮಾಹಿತಿಯನ್ನು ಅಭಿವೃದ್ಧಿ/ಇಂಜಿನಿಯರಿಂಗ್ ವಿಭಾಗದಿಂದ ನೀಡುವುದು.

ಕಾರ್ಯಸೂಚಿ ಸಂಖ್ಯೆ: ಆಡಳಿತ:ಸಾ.ಸ.3:5(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆ ಹಾಗೂ ಇತರ ಸಭೆಗಳಿಗೆ ಹಾಜರಾಗುವ ಅಧಿಕಾರೇತರ ಸದಸ್ಯರಿಗೆ ಮತ್ತು ಸರಕಾರಿ ಸೇವೆಯಲ್ಲಿರುವ ಸದಸ್ಯರುಗಳಿಗೆ ಪ್ರಯಾಣ ಭತ್ಯೆ, ದಿನಭತ್ಯೆ ಮತ್ತು ಉಪಸ್ಥಿತಿ ಭತ್ಯೆ ಪಾವತಿಯ ಕುರಿತು ರಚಿಸಿದ ಪರಿಷ್ಕೃತ ಪರಿನಿಯಮ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಮುಂದುವರಿದು, ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಇವರ ಪರವಾಗಿ ಸಿಂಡಿಕೇಟು ಸಭೆಗಳಲ್ಲಿ ಭಾಗವಹಿಸಲು ಪ್ರತ್ಯಾಯೋಜಿಸಲಾಗಿರುವ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರಿಗೂ ಉಪಸ್ಥಿತಿ ಭತ್ಯೆ ಪಾವತಿಸುವ ಕುರಿತು, ರಾಜ್ಯದ ಇತರೆ ವಿಶ್ವವಿದ್ಯಾನಿಲಯಗಳಿಗೆ ಪ್ರತ್ಯಾಯೋಜಿಸಲಾಗಿರುವ ಜಂಟಿ ನಿರ್ದೇಶಕರಿಗೆ ಉಪಸ್ಥಿತಿ ಭತ್ಯೆಯನ್ನು ಪಾವತಿಸಲಾಗುತ್ತಿದೆಯೇ ಎಂಬ ಬಗ್ಗೆ ಮಾಹಿತಿ ಪಡೆದುಕೊಂಡು ಮುಂದಿನ ಕ್ರಮ ಕೈಗೊಳ್ಳಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.3:6(2025)

ವಿಷಯ: ಕುಲಪತಿಗಳ ಪರಿಹಾರ ನಿಧಿಯ ವಿನಿಯೋಗದ ಬಗ್ಗೆ ತಯಾರಿಸಿದ ಮಾರ್ಗಸೂಚಿಯ ನಡವಳಿಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.3:7(2025)

ವಿಷಯ: ಶೈಕ್ಷಣಿಕ ವರ್ಷ 2024-25ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ವಿಭಾಗಗಳಲ್ಲಿ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ನಡೆಸಲ್ಪಡುವ ವಿವಿಧ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ವಿದ್ಯಾರ್ಥಿ ಪರಿಮಿತಿಯನ್ನು ನಿಗದಿಪಡಿಸಿರುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

ಡಾ.ಕೆ.ಸಿ.ಮಹದೇಶ, ಮಾನ್ಯ ಸಿಂಡಿಕೇಟು ಸದಸ್ಯರು ಇವರು ಸ್ನಾತಕೋತ್ತರ ವಿಭಾಗಗಳನ್ನು ಮುಚ್ಚದೇ ವಿದ್ಯಾರ್ಥಿಗಳ ಪ್ರವೇಶಾತಿಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯವು ಸೂಕ್ತ ಕ್ರಮ ಕೈಗೊಳ್ಳುವಂತೆ ನೀಡಿದ ಸಲಹೆಯನ್ನು ಒಪ್ಪಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:8(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಯೂನಿಯನ್ ಬ್ಯಾಂಕ್ ಎ.ಟಿ.ಎಂ. ಕಟ್ಟಡಕ್ಕೆ ಪರವಾನಿಗೆ ಅವಧಿ ಹಾಗೂ ಶುಲ್ಕ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.3:9(2025)

ವಿಷಯ: ಅಧ್ಯಯನ ಮಂಡಳಿಗಳ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಗಳ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.3:10(2025)

ವಿಷಯ: ಪದವಿ ಮತ್ತು ಸ್ನಾತಕೋತ್ತರ ತುಳು ಭಾಷಾ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.3:11(2025)

ವಿಷಯ: ಪದವಿ ಮಟ್ಟದ ಪರಿಸರ ಅಧ್ಯಯನ ಮಂಡಳಿಯನ್ನು ಸ್ನಾತಕೋತ್ತರ ಪರಿಸರ ವಿಜ್ಞಾನ ಅಧ್ಯಯನ ಮಂಡಳಿಯೊಂದಿಗೆ ವಿಲೀನಗೊಳಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಅಧ್ಯಯನ ಮಂಡಳಿಯ ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.3:12(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2024-25ನೇ ಸಾಲಿನ ಕ್ರೀಡಾ ಸಲಹಾ ಸಮಿತಿ ಸಭೆಯ ನಡವಳಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.3:13(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.3:14(2025)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಆಟದ ಮೈದಾನವನ್ನು ಬಾಡಿಗೆಗೆ ನೀಡುವ ಬಗ್ಗೆ.

**ನಿರ್್ಣಯ:** ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ:ಸಾ.ಸ.3:15(2025)

ವಿಷಯ: ಡಾ.ಯಶಸ್ವಿನಿ ಬಿ., ಇವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಹೂಡಿರುವ ರಿಟ್ ಅರ್ಜಿ ಸಂಖ್ಯೆ: 794/2023 (S-RES) ಕುರಿತು ವಿಶ್ವವಿದ್ಯಾನಿಲಯದ ವತಿಯಿಂದ ಮುಂದಿನ ಕ್ರಮಕೈಗೊಳ್ಳುವ ಬಗ್ಗೆ.

**ನಿರ್ಣಯ:** ಇಲಾಖಾ ತನಿಖೆ ನಡೆಸಲು ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:16(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಕೈಗಾರಿಕಾ ರಸಾಯನ ಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ ರಾಸಾಯನಿಕಗಳು/ಗ್ಲಾಸ್‌ವೇರ್ / ಉಪಯೋಗಿ ವಸ್ತುಗಳನ್ನು ಖರೀದಿ ಪ್ರಸ್ತಾವನೆಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:17(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಬ್ಯಾರಿ ಅಧ್ಯಯನ ಪೀಠ ಸ್ಥಾಪನೆ ಬಗ್ಗೆ ಪರಿಷ್ಕರಣೆ ಮಾಡಿ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸುವ ಕುರಿತು.

**ನಿರ್ಣಯ:** ಪರಿಷ್ಕೃತ ಪರಿನಿಯಮವನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:18(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕುಂದಾಪುರ ಕನ್ನಡ ಅಧ್ಯಯನ ಪೀಠವನ್ನು ಸ್ಥಾಪಿಸುವ ಕುರಿತು ರಚಿಸಲಾದ ಕರಡು ಪರಿನಿಯಮವನ್ನು ಅನುಮೋದಿಸುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:19(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Heartfulness Chair ಸ್ಥಾಪನೆ ಬಗ್ಗೆ ಪರಿಷ್ಕರಣೆ ಮಾಡಿ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸುವ ಕುರಿತು.

**ನಿರ್ಣಯ:** ಪರಿಷ್ಕೃತ ಪರಿನಿಯಮವನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:20(2025)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಫೆಬ್ರವರಿ 2025ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಪರಿಗಣಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:21(2025)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಮಾರ್ಚ್ 2025ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** IQAC ನಿರ್ದೇಶಕರು ಹಾಗೂ ತಂಡದ ಕಾರ್ಯಕ್ಕೆ ಸಿಂಡಿಕೇಟು ಮೆಚ್ಚುಗೆಯನ್ನು ವ್ಯಕ್ತಪಡಿಸಿತು. IQAC, ಸಲಹಾ ಸಮಿತಿ ಸಭೆಯನ್ನು ಶೀಘ್ರವಾಗಿ ಕರೆದು NAAC ಪೂರ್ವ ತಯಾರಿ ಕ್ರಮದ ಬಗ್ಗೆ ಚರ್ಚಿಸಿ ವರದಿ ನೀಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಹಣಕಾಸು:ಸಾ.ಸ.3:22(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2025-26ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2024-25ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಇನ್ನು ಮುಂದೆ ಆಯವ್ಯಯವನ್ನು ಆರ್ಥಿಕ ವರ್ಷದ ಮಾರ್ಚ್ ತಿಂಗಳೊಳಗೆ ಮಂಡಿಸಿ, ಅನುಮೋದನೆ ಪಡೆಯುವಂತೆ ಹಣಕಾಸು ಅಧಿಕಾರಿಯವರಿಗೆ ಸೂಚಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಹಣಕಾಸು:ಸಾ.ಸ.3:23(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ವಿಭಾಗಕ್ಕೆ Double Entry System ನ್ನು ಕಾರ್ಯಗತಗೊಳಿಸಲು ಅಗತ್ಯವಿರುವ Tally Prime Software ಖರೀದಿಗೆ ಘಟನೋತ್ತರ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. Double Entry System ಪ್ರಗತಿಯ ಬಗ್ಗೆ ಪ್ರತಿ ವಾರ ಮಾನ್ಯ ಸಿಂಡಿಕೇಟ್ ಸದಸ್ಯರಾದ ಸಿ.ಎ. ಶ್ರೀ ನಿತಿನ್ ಜೆ. ಶೆಟ್ಟಿಯವರಿಗೆ ಮಾಹಿತಿ ನೀಡಿ ಅವರಿಂದ ಸಲಹೆ ಪಡೆಯುವ ಕಾರ್ಯವನ್ನು ಸ್ವತ: ಹಣಕಾಸು ಅಧಿಕಾರಿಯವರೇ ನಿರ್ವಹಿಸುವಂತೆ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.3:24(2025)

ವಿಷಯ: ಫಾದರ್ ಮುಲ್ಲರ್ ಕಾಲೇಜು, ಮಂಗಳೂರು ಇಲ್ಲಿಗೆ ಪಿಹೆಚ್.ಡಿ. ವ್ಯಾಸಂಗಕ್ಕೆ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಮುಂದುವರಿದು, ಡಾ. ಕೆ.ಸಿ. ಮಹದೇಶ ಇವರು ನೀಡಿರುವ ಸಲಹೆಯಂತೆ, ವಿಶ್ವವಿದ್ಯಾನಿಲಯದಲ್ಲೂ Audiology and Speech Language ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳನ್ನು ಹೊಸದಾಗಿ ಪ್ರಾರಂಭಿಸುವ ಬಗ್ಗೆ ಕ್ರಮವಹಿಸಲು ನಿರ್ಣಯಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.3:25(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಅಧೀನದಲ್ಲಿರುವ ಘಟಕ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕ ಕಾರ್ಯಕ್ರಮಗಳಿಗೆ ಕನಿಷ್ಠ ವಿದ್ಯಾರ್ಥಿ ಪರಿಮಿತಿ ನಿಗದಿಪಡಿಸುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು.<br>ಡಾ.ಎಸ್.ಬಿ.ಎಂ ಪ್ರಸನ್ನ ಮತ್ತು ಡಾ.ಕೆ.ಸಿ.ಮಹದೇಶ, ಪ್ರಸ್ತುತ ನಡೆಸುತ್ತಿರುವ ಕೋರ್ಸ್ ಗಳನ್ನು ವಿದ್ಯಾರ್ಥಿಯ ಪ್ರವೇಶಾತಿಗೆ ಕನಿಷ್ಠ ವಿದ್ಯಾರ್ಥಿ ಪರಿಮಿತಿ ವಿಧಿಸಿ ನಿಲುಗಡೆಗೊಳಿಸದೆ ಆ ಕೋರ್ಸ್ ನ್ನು ಪುನರುಜ್ಜೀವನಗೊಳಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯವು ಅಗತ್ಯ ಕ್ರಮ ವಹಿಸುವಂತೆ ಸಲಹೆ ನೀಡಿದರು.<br>ಅಲ್ಲದೇ ಸದರಿಯವರು ತಮ್ಮ ಅಸಮ್ಮತಿಯನ್ನು ಲಿಖಿತವಾಗಿ ಸಲ್ಲಿಸಿ, ಬಡ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ, ಈ ಹಿಂದೆ ಇದ್ದ ನಿಯಮದಂತೆ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳಿಗೆ ಕ್ರಮವಾಗಿ 20 ಮತ್ತು 15 ವಿದ್ಯಾರ್ಥಿ ಪರಿಮಿತಿಯನ್ನು ಮುಂದುವರಿಸುವಂತೆ ಕೋರಿದರು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಸಾ.ಸ.3:26(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಮತ್ತು A.J. Institute of Medical Sciences & Research Centre, Mangalore ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಆಡಳಿತ:ಸಾ.ಸ.3:27(2025) |
| ವಿಷಯ: | ವಿಶ್ವವಿದ್ಯಾನಿಲಯದ ಕಾವೇರಿ ಅತಿಥಿಗೃಹದಲ್ಲಿ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮಂಗಳೂರು ಇವರು ವಾಸ್ತವ್ಯ ಹೂಡಿದ ಕೊಠಡಿ ಬಾಡಿಗೆಯನ್ನು ನಿಗದಿಪಡಿಸುವ ಬಗ್ಗೆ. |
| **ನಿರ್ಣಯ:** | ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲು ನಿರ್ಣಯಿಸಲಾಯಿತು. |

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ.ಘಟಕ :ಸಾ.ಸ.3:28(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಕೇಂದ್ರ ಸರಕಾರದಿಂದ ಹೊಸದಾಗಿ ನಿರ್ಮಾಣಗೊಂಡ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿನಿಯರ ವಸತಿನಿಲಯದ ನಿರ್ವಹಣೆಯನ್ನು ಸಮಾಜ ಕಲ್ಯಾಣ ಇಲಾಖೆಗೆ ವಹಿಸುವ ಬಗ್ಗೆ.

**ನಿರ್ಣಯ:** ವಿಸ್ತೃತ ಚರ್ಚೆಯನ್ನು ನಡೆಸುವ ಸಲುವಾಗಿ ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.3:29(2025)

ವಿಷಯ: ಶ್ರೀ ಕೆ.ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

ವಿಷಯ 1 : ತಾ. 09.12.2024ರ ಸಿಂಡಿಕೇಟ್ ಸಭೆಯಲ್ಲಿ ಪೀಠಗಳ ನಿರ್ದೇಶಕ ಹಾಗೂ ಸದಸ್ಯರುಗಳ ಆಯ್ಕೆ ಬಗ್ಗೆ ಪ್ರಸ್ತಾವನೆ ಸಲ್ಲಿಸಿದ್ದು, ನಿರ್ದೇಶಕರುಗಳಿಗೆ 2 ವರ್ಷಗಳ ಅವಧಿ ಎಂಬುದಾಗಿ ನಿರ್ಣಯಿಸಲಾಗಿದೆ. ಹೊಸ ನಿರ್ದೇಶಕರುಗಳ ಹಾಗೂ ಸದಸ್ಯರುಗಳ ಆಯ್ಕೆ ಆಗಿದೆಯೇ ಎಂಬುದರ ವಿವರವಾದ ಮಾಹಿತಿಗಳು ಹಾಗೂ ವಿವಿಧ ಪೀಠಗಳ ಕಾರ್ಯ ಚಟುವಟಿಕೆಗಳ ಮಾಹಿತಿ ನೀಡುವುದರ ಬಗ್ಗೆ ಪ್ರಸ್ತಾವನೆಗಳು.

**ನಿರ್ಣಯ:** ಮಾಹಿತಿಯನ್ನು ನೀಡಲಾಯಿತು.

ವಿಷಯ 2 : ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ವಿಶ್ವಮಂಗಳ ಶಿಕ್ಷಣ ಸಂಸ್ಥೆಯು ವಿಶ್ವವಿದ್ಯಾನಿಲಯದ ಆಡಳಿತಕ್ಕೊಳಪಟ್ಟಿದೆಯೇ ಅಥವಾ ಸ್ವತಂತ್ರವಾಗಿ ಕಾರ್ಯ ನಿರ್ವಹಿಸುತ್ತಿದೆಯೋ ಎಂಬುದರ ಬಗ್ಗೆ ಸ್ಪಷ್ಟನೆ ಇಲ್ಲ. ವಿಶ್ವಮಂಗಳ ವಿದ್ಯಾ ಸಂಸ್ಥೆಯು 1960ರ ಸಂಘ ಸಂಸ್ಥೆಗಳ ನೋಂದಣಿ ನಿಯಮದಂತೆ ನೋಂದಣಿಯಾಗಿರುವ ಸಂಸ್ಥೆಯಾಗಿರುತ್ತದೆ. ಈ ಸಂಸ್ಥೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ, ಕುಲಸಚಿವರು, ಹಣಕಾಸು ಅಧಿಕಾರಿಗಳು, ಮುಖ್ಯ ಕಾರ್ಯಕಾರಿ ಅಭಿಯಂತರರು, ಪ್ರೊಫೆಸರುಗಳು, ಪ್ರಾಧ್ಯಾಪಕರುಗಳು ಹಾಗೂ ಶಿಕ್ಷಕೇತರ ಸಿಬ್ಬಂದಿಗಳು ಈ ಸಂಸ್ಥೆಯ ಸದಸ್ಯರು ಪದಾಧಿಕಾರಿಗಳಾಗಿರುತ್ತಾರೆ ಎಂಬುದು ಸಂಘದ ಬೈಲಾದಲ್ಲಿ ಕಂಡು ಬರುತ್ತದೆ ಹಾಗೂ ಇದು ಒಂದು ನೋಂದಾಯಿತ ಸ್ವತಂತ್ರ ಸಂಸ್ಥೆಯಾಗಿರುತ್ತದೆ ಹಾಗೂ ವಿದ್ಯಾರ್ಥಿಗಳಿಂದ ಡೊನೇಷನ್ ಪಡೆದುಕೊಂಡು ತರಗತಿ ನಡೆಸುವ ಸಂಸ್ಥೆಯಾಗಿರುತ್ತದೆ. ಈ ಸಂಸ್ಥೆಯು ಮಂಗಳೂರು ವಿಶ್ವವಿದ್ಯಾನಿಲಯದ ಜಮೀನಿನಲ್ಲಿ ವಿಶ್ವವಿದ್ಯಾನಿಲಯದ ಕಟ್ಟಡದಲ್ಲಿ ಕಾರ್ಯನಿರ್ವಹಿಸುವುದರಿಂದ ಇದು ವಿಶ್ವವಿದ್ಯಾನಿಲಯದ ಆಡಳಿತಕ್ಕೊಳಪಡುತ್ತದೆಯೋ ಇಲ್ಲವೋ ಎಂಬುದರ ಬಗ್ಗೆ ಮಾಹಿತಿಗಾಗಿ ಪ್ರಸ್ತಾವನೆ.

| | |
|---|---|
| **ನಿರ್ಣಯ:** | ವಿಶ್ವಮಂಗಳ ಶಾಲೆಗೆ ಸಂಬಂಧಿಸಿದಂತೆ ದಾಖಲೆಗಳನ್ನು ಪರಿಶೀಲಿಸಿ ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿಯನ್ನು ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 3 : | ತಾ.17-2-2025 ರಂದು ನಡೆದ ವಾರ್ಷಿಕ ಮಹಾಸಭೆಯಲ್ಲಿ ಬೈಲಾ ಪ್ರಕಾರ ಹೊಸ ಆಡಳಿತ ಸಮಿತಿ ರಚನೆ ಆಗಿಲ್ಲ ಎಂಬುದಾಗಿ ತಿಳಿದು ಬಂದಿರುವುದರಿಂದ ಮತ್ತು ಸ್ವತಂತ್ರ ಸಂಸ್ಥೆಯಾಗಿರುವುದರಿಂದ ಪಂಚಾಯತ್ ರಾಜ್ ಪ್ರಕರಣ 58 ಹಾಗೂ 199ರನ್ವಯ ಗ್ರಾಮ ಪಂಚಾಯತ್‌ಗೆ ಕಡ್ಡಾಯವಾಗಿ ತೆರಿಗೆ ಪಾವತಿಸಬೇಕಾಗುತ್ತದೆ. ಈ ಬಗ್ಗೆ ಮಾಹಿತಿ ನೀಡುವುದಕ್ಕೆ ಪ್ರಸ್ತಾವನೆಗಳು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿಯನ್ನು ಮಂಡಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.3:30(2025) |
| ವಿಷಯ: | **ಡಾ.ಕೆ.ಸಿ.ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.** |
| ವಿಷಯ 1 : | ಪಿ.ಎಂ. ಉಷಾ ಯೋಜನೆ ಅಡಿಯಲ್ಲಿ 2024-25ರ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ 20 ಕೋಟಿ ಹಣ ಬಂದಿರುವ ಬಗ್ಗೆ 2025-26ನೇ ಸಾಲಿನಲ್ಲಿ ಕೈಗೊಳ್ಳುವ ಕೆಲಸಗಳ ಬಗ್ಗೆ ವಿವರಣೆ ನೀಡುವುದು ಮತ್ತು ಈ ಹಣದಿಂದ ಕೈಗೊಳ್ಳಲಿರುವ ಯೋಜನೆಗಳ ಬಗ್ಗೆ ಸಮಗ್ರ ವರದಿಯನ್ನು ನೀಡುವುದು ಮತ್ತು ಚರ್ಚಿಸಿ ನಿರ್ಣಯಿಸುವುದು. |
| **ನಿರ್ಣಯ:** | ಪಿ.ಎಂ. ಉಷಾ ಅನುದಾನಕ್ಕೆ ಸಂಬಂಧಿಸಿದಂತೆ, ಯೋಜಿಸಿರುವ ವಾರ್ಷಿಕವಾರು ವೆಚ್ಚಗಳ ಮಾಹಿತಿಯನ್ನು ಡಾ.ಕೆ.ಸಿ. ಮಹದೇಶ ಇವರಿಗೆ ನೀಡಲು ನಿರ್ಣಯಿಸಲಾಯಿತು. |
| ವಿಷಯ 2 : | ಕಾಪು - ಬೆಳಪು ಸಂಶೋಧನಾ ಕೇಂದ್ರ ಕಟ್ಟಡವನ್ನು ಪೂರ್ಣಗೊಳಿಸಲು ಸರ್ಕಾರದ ವತಿಯಿಂದ ಬರಬೇಕಾಗಿರುವ ಹಣದ ಬಗ್ಗೆ ಮತ್ತು ಸಂಶೋಧನಾ ಕೇಂದ್ರ ಪ್ರಾರಂಭ ಮಾಡುವ ಬಗ್ಗೆ ಮತ್ತು ಅಂತರಾಷ್ಟ್ರೀಯ ಹಾಸ್ಟೆಲನ್ನು ಪೂರ್ಣಗೊಳಿಸಿ ಪ್ರಾರಂಭ ಮಾಡುವ ಬಗ್ಗೆ ಚರ್ಚಿಸಿ ನಿರ್ಣಯಿಸಲು ಕೋರಿದೆ. |
| **ನಿರ್ಣಯ:** | ಹಣಕಾಸು ಸಮಿತಿಯ ತೀರ್ಮಾನದಂತೆ ಬಾಕಿ ಇರುವ ರೂ. 11.50 ಕೋಟಿ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಬರೆದ ಪತ್ರದ ಪ್ರತಿಯನ್ನು ಹಣಕಾಸು ಅಧಿಕಾರಿಯವರು ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಇವರಿಗೆ ಕೂಡಲೇ ನೀಡಲು ನಿರ್ಣಯಿಸಲಾಯಿತು. |

ವಿಷಯ 3 : 2024-25ರ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಂದಿರುವ ಅನುದಾನಗಳು ಮತ್ತು 2025-26ರ ಸಾಲಿನಲ್ಲಿ ಅನುದಾನಗಳನ್ನು ತರುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಿರುವ (ನೀಲಿ ನಕ್ಷೆ) ಮಾಹಿತಿಯನ್ನು ನೀಡಲು ಕೋರಿದೆ ಮತ್ತು ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಮಾನ್ಯ ಸಿಂಡಿಕೇಟು ಸದಸ್ಯರಾದ, ಡಾ.ಕೆ.ಸಿ.ಮಹದೇಶ ಇವರು ಕೋರಿರುವ ಮಾಹಿತಿಯನ್ನು ಕೂಡಲೇ ನೀಡಲು ನಿರ್ಣಯಿಸಲಾಯಿತು.

ವಿಷಯ 4 : ಸಾಫ್ಟ್‌ವೇರ್ ಟ್ಯಾಲಿ ಮತ್ತು ಡಬಲ್ ಡಿಜಿಟ್ ಆಡಿಟ್ಟನ್ನು ಪ್ರಾರಂಭ ಮಾಡುವ ಬಗ್ಗೆ ಮತ್ತು 2024 ಜನವರಿಯಿಂದ ಆಂತರಿಕ ಆಡಿಟ್ ವರದಿಯನ್ನು ತಯಾರಿಸಲು ಸಾಫ್ಟ್‌ವೇರ್ ಟ್ಯಾಲಿಯನ್ನು ಬಳಸಿಕೊಳ್ಳುವ ಬಗ್ಗೆ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಚರ್ಚಿಸಲಾಯಿತು.

ವಿಷಯ 5 : ಬೋಧಕ ಮತ್ತು ಬೋಧಕೇತರರು, ಅತಿಥಿ ಉಪನ್ಯಾಸಕರು ಮತ್ತು ಹೊರಗುತ್ತಿಗೆ ನೌಕರರ ಹಾಜರಾತಿ ಮತ್ತು ಕರ್ತವ್ಯ ನಿರ್ವಹಣೆ ಮಾಡುತ್ತಿರುವ ಬಗ್ಗೆ ಪರಿಶೀಲಿಸಿ ವೇತನ ಪಾವತಿ ಮಾಡುತ್ತಿರುವ ಬಗ್ಗೆ ಮಾಹಿತಿ ಒದಗಿಸುವುದು ಮತ್ತು ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಮಾಹಿತಿ ನೀಡಲಾಯಿತು. ಎಲ್ಲಾ ಕಛೇರಿ/ ವಿಭಾಗಗಳಲ್ಲಿ ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ಅಳವಡಿಸಿ, ಸಂಬಂಧಪಟ್ಟವರು ಹಾಜರಾತಿಯನ್ನು ಪರಿಶೀಲಿಸುವಂತೆ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.3:31(2025)

ವಿಷಯ: **ಶ್ರೀ ರಘುರಾಜ್ ಕೆ., ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.**

ವಿಷಯ : 2018 ರಿಂದ 2023ರವರೆಗೆ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ಮತ್ತು ಹೊರಗುತ್ತಿಗೆ ಆಧಾರದಲ್ಲಿ ಲಭ್ಯವಿದ್ದ ಹುದ್ದೆಗಳ ಸಂಖ್ಯೆ ಮೀರಿ ನೇಮಕ ಮಾಡಲಾದ ಹೆಚ್ಚುವರಿ ಸಿಬ್ಬಂದಿಗಳ ಸಂಖ್ಯೆಯ ವಿವರ ಮತ್ತು ಇದರಿಂದ ವಿಶ್ವವಿದ್ಯಾನಿಲಯಕ್ಕೆ ಆಗಿರುವ ನಷ್ಟದ ಮೊತ್ತವನ್ನು ಸಿಂಡಿಕೇಟ್ ಸಭೆಯಲ್ಲಿ ಮಂಡಿಸಿ ಚರ್ಚೆ ನಡೆಸುವುದು. ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ವಿಶ್ವವಿದ್ಯಾನಿಲಯಕ್ಕೆ ನೀಡಲ್ಪಟ್ಟ ನಿರ್ದೇಶನದ ವಿವರ ಮತ್ತು ವಿಶ್ವವಿದ್ಯಾನಿಲಯ ಈ ಬಗ್ಗೆ ಕೈಗೊಂಡ ಕ್ರಮ.

**ನಿರ್ಣಯ:** ಪೂರ್ಣ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.3:32(2025)

ವಿಷಯ: ಶ್ರೀಮತಿ ನಾಗವೇಣಿ ಪಿ., ನಿವೃತ್ತ ಉಪಕುಲಸಚಿವರು, ಕುಲಸಚಿವರ ಕಚೇರಿ ಇವರ ಪಿಂಚಣಿ ಸೌಲಭ್ಯಗಳ ಕುರಿತು.

**ನಿರ್ಣಯ:** ಈ ಬಗ್ಗೆ ರಚಿಸಲಾಗಿದ್ದ ಸಮಿತಿಯ ಇಬ್ಬರು ಸದಸ್ಯರು ಪಿಂಚಣಿ ಸೌಲಭ್ಯ ಪಾವತಿಸುವ ಬಗ್ಗೆ ತಮ್ಮ ಒಪ್ಪಿಗೆಯನ್ನು ಸೂಚಿಸಿರುತ್ತಾರೆ. ಸಮಿತಿಯ ಅಧ್ಯಕ್ಷರಾದ ಕುಲಸಚಿವರು ಸಮಿತಿ ಸಭೆಯ ವರದಿಯಲ್ಲಿ ತಾನು ನೀಡಿರುವ ಅಭಿಪ್ರಾಯಕ್ಕೆ ಬದ್ಧನಾಗಿರುತ್ತೇನೆಂದು ನಿರ್ಣಯದಲ್ಲಿ ದಾಖಲಿಸುವಂತೆ ತಿಳಿಸಿದರು. ಆದಾಗ್ಯೂ ಸಮಿತಿ ಸದಸ್ಯರ ಬಹುಮತದ ಮೇರೆಗೆ ಶ್ರೀಮತಿ ನಾಗವೇಣಿ ಇವರಿಗೆ ಪಾವತಿಸಬೇಕಾಗಿರುವ ಸಂಪೂರ್ಣ ನಿವೃತ್ತಿ ಸೌಲಭ್ಯಗಳನ್ನು ಪಾವತಿಸಲು ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ: ಸಾ.ಸ.3:33(2025)

ವಿಷಯ: ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಸ್ನಾತಕ ಕಾರ್ಯಕ್ರಮಗಳ ಪ್ರವೇಶಾತಿ ಹಾಗೂ ಸರ್ಟಿಫಿಕೇಟುಗಳ ಶುಲ್ಕಗಳನ್ನು ಪರಿಷ್ಕರಿಸಿ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ: ಸಾ.ಸ.3:34(2025)

ವಿಷಯ: 43ನೇ ಘಟಿಕೋತ್ಸವ ಕಾರ್ಯಕ್ರಮದ ಪ್ರಯುಕ್ತ ತಗಲಿದ ಭೋಜನ ವೆಚ್ಚದ ಬಿಲ್ಲು ಪಾವತಿ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.3:35(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Airport Authority of India (AAI) ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ: ಸಾ.ಸ.3:36(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ/ಘಟಕ/ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತಾ ಪಟ್ಟಿಯನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ: ಸಾ.ಸ.3:37(2025)

ವಿಷಯ: ಮಹಾತ್ಮ ಗಾಂಧಿ ಮೆಮೋರಿಯಲ್ ಕಾಲೇಜು, ಉಡುಪಿ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.3:38(2025)

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ/ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.3:39(2025)

ವಿಷಯ: ಡಾ.ಜಗದೀಶ್ ಪ್ರಸಾದ್ ಡಿ., ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಇವರಿಗೆ ನೀಡಿರುವ ಪ್ರಾಧ್ಯಾಪಕ ಪದೋನ್ನತಿ ದಿನಾಂಕವನ್ನು ಮರುನಿಗದಿಪಡಿಸುವುದಕ್ಕೆ ಸಂಬಂಧಿಸಿ ಆಯ್ಕೆ ಸಮಿತಿ ಸಭೆಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ: ಸಾ.ಸ.3:40(2025)

ವಿಷಯ: ಮೋತಿ ಮಹಲ್ ಕಾಲೇಜ್ ಆಫ್ ಹೋಟೆಲ್ ಮ್ಯಾನೇಜ್ಮೆಂಟ್, ಮಂಗಳೂರು ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.3:41 (2025)

ವಿಷಯ: ಡಾ.ಎಸ್.ಬಿ.ಎಂ.ಪ್ರಸನ್ನ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

ವಿಷಯ 1 : ಕುಲಪತಿಗಳ ನೇಮಕಾತಿಗಾಗಿ ರಾಜ್ಯದ ಹಾಗೂ ಕೇಂದ್ರದ ಹಲವು ವಿಶ್ವವಿದ್ಯಾನಿಲಯಗಳು ಅರ್ಜಿ ಕರೆಯುವುದು ಸರಿಯಷ್ಟೆ. ಅದಕ್ಕೆ ಸಂಬಂಧಪಟ್ಟಂತೆ ನಮ್ಮ ಪ್ರತಿಷ್ಠಿತ ವಿಶ್ವವಿದ್ಯಾನಿಲಯದಿಂದ ಹಲವು ಪ್ರಾಧ್ಯಾಪಕರುಗಳು ಅರ್ಜಿ ಸಲ್ಲಿಸುವುದು ಹಾಗೂ ಆಯ್ಕೆ ಆಗುವುದು ಸಂತೋಷಕರ ವಿಷಯ. ಆದರೆ, ಹಾಗೇ ಸಲ್ಲಿಸುವ ಅರ್ಜಿಗಳನ್ನು ಕುಲಸಚಿವರು ಹಾಗೂ ಕುಲಪತಿಗಳು ಪ್ರಾಧ್ಯಾಪಕರುಗಳು ಸಲ್ಲಿಸುವ ಅರ್ಜಿಗಳನ್ನು ಅನುಮೋದಿಸಿ ಹಾಗೂ ಅವರಿಗೆ "ನಿರಾಕ್ಷೇಪಣ ಪತ್ರ" ಕೊಡುವುದು ಸರಿಯಷ್ಟೆ. ಆದರೆ, ನಮ್ಮ ಪ್ರತಿಷ್ಠಿತ ವಿಶ್ವವಿದ್ಯಾನಿಲಯದಲ್ಲಿ ಕೆಲವು ಪ್ರಾಧ್ಯಾಪಕರುಗಳ ಮೇಲೆ ಇರುವ ಆರೋಪಗಳು, ಇಲಾಖಾ ವಿಚಾರಣೆಗಳು ಹಾಗೂ ಲೋಕಾಯುಕ್ತ ಪ್ರಕರಣಗಳ ಬಗ್ಗೆ ಸಿಂಡಿಕೇಟ್ ಸಭೆಗೆ ಮಾಹಿತಿಯನ್ನು ಒದಗಿಸುವುದು ಹಾಗೂ ಚರ್ಚಿಸುವುದು.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ವಿಷಯ 2 : ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ಸಿಂಡಿಕೇಟ್‌ನ ಅಧಿಕಾರ (29), (29 H) "To prepare the financial estimate of the University and to submit the same to the Academic Council" ರಲ್ಲಿ, ಉಲ್ಲೇಖವಾಗಿರುವ ಸಿಂಡಿಕೇಟ್‌ನ ಅಧಿಕಾರದಂತೆ 2025-26ರ ಅಂದಾಜು ಹಣಕಾಸು ಆಯವ್ಯಯ ಪಟ್ಟಿಯನ್ನು ಮಾರ್ಚ್ 31, 2025ರ ಒಳಗೆ ಸಿಂಡಿಕೇಟ್‌ನಲ್ಲಿ ಚರ್ಚಿಸಿ ಅನುಮೋದನೆ ಪಡೆಯಬೇಕಾಗಿತ್ತು. ಆದರೆ, ಅದನ್ನು ಸಂಬಂಧಪಟ್ಟ ಹಣಕಾಸು ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಅವರನ್ನು ಹೊಣೆಗಾರರನ್ನಾಗಿ ಮಾಡಿ ಸಿಂಡಿಕೇಟ್ ಸಭೆಯಲ್ಲಿ ಚರ್ಚಿಸುವುದು.

**ನಿರ್ಣಯ:** ಈ ಸಭೆಯಲ್ಲಿ ಮಂಡಿಸಲಾಗಿರುವ ಕಾರ್ಯಸೂಚಿ ಸಂಖ್ಯೆ: ಹಣಕಾಸು:ಸಾ.ಸ.3:22(2025) ರಲ್ಲಿ ಚರ್ಚಿಸಿ ಈ ವಿಷಯದ ಬಗ್ಗೆ ನಿರ್ಣಯ ಕೈಗೊಳ್ಳಲಾಗಿದೆ.

| | |
|---|---|
| ವಿಷಯ 3 : | 2025ರ ಘಟಿಕೋತ್ಸವವನ್ನು ಯಶಸ್ವಿಯಾಗಿ ನಡೆಸಿದ ಕುಲಪತಿಗಳು ಹಾಗೂ ಕುಲಸಚಿವರು ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸುತ್ತಾ ಘಟಿಕೋತ್ಸವಕ್ಕೆ ಆದ ಖರ್ಚು ವೆಚ್ಚಗಳನ್ನು ಸಿಂಡಿಕೇಟ್ ಸಭೆಯಲ್ಲಿ ಮಂಡಿಸುವುದು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 4 : | ದಿನಾಂಕ 25.05.2023ರಂದು ನಡೆದ ತೃತೀಯ ಸಾಮಾನ್ಯ ಸಭೆಯಲ್ಲಿ ಇತರೆ ವಿಷಯಗಳ ಕ್ರ.ಸಂ.-9 ರಲ್ಲಿ ಡಾ. ಸಿದ್ಧಲಿಂಗಸ್ವಾಮಿ ಕೆ.ಪಿ, Research Associate, Centre for the Study of Social Exclusion & Inclusive Policy (CSSEIP) ಮಂಗಳೂರು ವಿಶ್ವವಿದ್ಯಾನಿಲಯ ಇವರು ವೇತನ ಹೆಚ್ಚಿಸುವಂತೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿಕೊಂಡು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟ್ ನಿರ್ಣಯಿಸಲಾಗಿತ್ತು. ಆದರೆ, ಇದುವರೆವಿಗೂ ಈ ವಿಷಯವಾಗಿ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ಹಾಗಾಗಿ ಈಗ ಮತ್ತೊಮ್ಮೆ ಈ ವಿಷಯವನ್ನು ಚರ್ಚಿಸಿ ನಿರ್ಧಾರ ಕೈಗೊಂಡು Centre for the Study of Social Exclusion & Inclusive Policy (CSSEIP) ಕೆಲಸಗಳಿಗೆ ಪೂರಕವಾಗುವಂತೆ ಸಹಕಾರ ನೀಡುವುದು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.3:42(2025) |
| ವಿಷಯ: | ಶ್ರೀ ಸುರೇಶ್ ಬಿ. ನಾವೂರು, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | ಇತ್ತೀಚೆಗೆ ನಡೆದ ಘಟಿಕೋತ್ಸವ ಸಮಾರಂಭದಲ್ಲಿ ಜರುಗಿದ ಡಾಕ್ಟರೇಟ್ ಪದವಿ ಪ್ರದಾನ ಕಾರ್ಯಕ್ರಮದ ಬಗ್ಗೆ ವಿಶ್ವವಿದ್ಯಾನಿಲಯದ ಘನತೆ, ಗೌರವಕ್ಕೆ ಧಕ್ಕೆ ಬರುವ ರೀತಿಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಬಿತ್ತರವಾದ ಬಗ್ಗೆ ಹಾಗೂ ಸಾರ್ವಜನಿಕವಾಗಿ ಅಪಸ್ವರಗಳು ಬಂದ ಬಗ್ಗೆ ಗಂಭೀರವಾಗಿ ಪರಿಗಣಿಸುವುದು. ಈ ಬಗ್ಗೆ ಚರ್ಚಿಸುವುದು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 2 : | ವಿಶ್ವವಿದ್ಯಾನಿಲಯದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹಾಗೂ ಇನ್ನಿತರ ಅನುದಾನಗಳನ್ನು ಬಳಸಿ ಕೈಗೊಳ್ಳಲಾಗುವ ಕಾಮಗಾರಿಗಳ ಪ್ರಗತಿ ಪರಿಶೀಲನೆ ಮಾಡಲು ಮತ್ತು ಈ ಮೊದಲು ನಡೆದಿರುವ ಹಲವಾರು ಅವ್ಯವಹಾರಗಳು ಮಾಧ್ಯಮಗಳಲ್ಲಿ ಇತ್ತೀಚೆಗೆ ಸುದ್ದಿಯಾಗುತ್ತಿದ್ದು, ಇದನ್ನು |

| | |
|---|---|
| | ತಡೆಗಟ್ಟಲು ಸಿಂಡಿಕೇಟ್‌ನಲ್ಲಿ ಕಾಮಗಾರಿಗಳ ವೀಕ್ಷಣೆಗೆ ಸಮಿತಿ ರಚಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 3 : | ವಿಶ್ವವಿದ್ಯಾನಿಲಯದಲ್ಲಿ ಈ ಮೊದಲು ಹಣಕಾಸು ಅವ್ಯವಹಾರ ನಡೆಸಿರುವ ಕೆಲವೊಂದು ವಿಶ್ವವಿದ್ಯಾನಿಲಯದ ಆಡಳಿತಾತ್ಮಕ ಮುಖ್ಯಸ್ಥರುಗಳ ಬಗ್ಗೆ ಈವರೆಗೂ ಯಾವುದು ಕ್ರಮ ಕೈಗೊಳ್ಳದೆ ಇದ್ದು, ಈ ಬಗ್ಗೆ ಸಾರ್ವಜನಿಕವಾಗಿ ವ್ಯಾಪಕ ಟೀಕೆಗಳು ವ್ಯಕ್ತವಾಗುತ್ತಿದ್ದು, ಈ ಬಗ್ಗೆ ಸೂಕ್ತ ಕಾರಣಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮಕೈಗೊಳ್ಳುವುದು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 4 : | ಸರಕಾರದಿಂದ ಇತ್ತೀಚೆಗೆ ಬಂದಿರುವ ಅನುದಾನದಿಂದ ಪಿಂಚಣಿ ನೀಡಲಾಗಿರುವ ಪ್ರಾಧ್ಯಾಪಕರುಗಳ ವಿವರ ಮತ್ತು ನೀಡಲಾಗಿರುವ ಪಿಂಚಣಿ ಮೊತ್ತ. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.3:43(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ವಿಜ್ಞಾನ ಸಂಕೀರ್ಣ ಕಟ್ಟಡದ ವಿಶೇಷ ದುರಸ್ತಿ ಕಾಮಗಾರಿ (ರೂಸಾ ಅನುದಾನ) - ಪರಿಷ್ಕೃತ ಅಂದಾಜುಪಟ್ಟಿ ಮತ್ತು ವರ್ಕ್ ಸ್ಲಿಪ್ ಅನುಮೋದನೆ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.3:44(2025) |
| ವಿಷಯ: | ರೂಸಾ ಅನುದಾನದಡಿ ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಉದ್ಯೋಗ ಮಾಹಿತಿ ಕೇಂದ್ರ ಕಟ್ಟಡದ ಮೊದಲನೇ ಅಂತಸ್ತಿನಲ್ಲಿ ಪರಿಸರ ವಿಜ್ಞಾನ ವಿಭಾಗ ಕಟ್ಟಡದ ನಿರ್ಮಾಣ ಕಾಮಗಾರಿ - ಹೆಚ್ಚುವರಿ ಪರಿಮಾಣ ಮೊತ್ತ (Excess Quantity - Work Slip) ಹಾಗೂ ಹೆಚ್ಚುವರಿ ಐಟಂ ಮತ್ತು ಉಳಿಕೆ ಮೊತ್ತಕ್ಕೆ ಹಾಗೂ ಪರಿಷ್ಕೃತ ಅಂದಾಜು ಪಟ್ಟಿ ಮೊತ್ತದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.3:45(2025)

ವಿಷಯ: Construction of Shree Narayana Guru Adhyayana Peeta Building at Mangalore University Campus, Mangalagangothri – ಹೆಚ್ಚುವರಿ ಪರಿಮಾಣ ಮೊತ್ತ (Excess Qty., - Work Slip) ಹಾಗೂ ಹೆಚ್ಚುವರಿ ಐಟಂ (EIRL) ಮತ್ತು ಉಳಿಕೆ ಮೊತ್ತಗಳಿಗೆ ಹಾಗೂ ಪರಿಷ್ಕೃತ ಅಂದಾಜುಪಟ್ಟಿಗೆ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.3:46(2025)

ವಿಷಯ: Construction of Ladies Hostel for SC/ST Students under AICTE-CAFES Scheme at Mangalore University Campus, Mangalagagothri – ಹೆಚ್ಚುವರಿ ಪರಿಮಾಣ (Excess Qty. - work slip) ಉಳಿಕೆ ಮೊತ್ತ ಮತ್ತು ಪರಿಷ್ಕೃತ ಅಂದಾಜುಪಟ್ಟಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರೆ ವಿಷಯಗಳು:**

1) ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಪ್ರಾಧ್ಯಾಪಕರುಗಳನ್ನು ವಿಶ್ವವಿದ್ಯಾನಿಲಯಕ್ಕೆ ಆಹ್ವಾನಿಸಿ, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಮಾನ್ಯ ಸಿಂಡಿಕೇಟು ಸದಸ್ಯರಾದ, ಡಾ.ಎಸ್.ಬಿ.ಎಂ. ಪ್ರಸನ್ನ ಮತ್ತು ಡಾ.ಕೆ.ಸಿ. ಮಹದೇಶರವರು ನೀಡಿದ ಸಲಹೆಗೆ ಅಗತ್ಯಕ್ಕೆ ತಕ್ಕಂತೆ ನಿವೃತ್ತ ಪ್ರಾಧ್ಯಾಪಕರನ್ನು ಆಹ್ವಾನಿಸುವ ಬಗ್ಗೆ ಪರಿಶೀಲಿಸಲು ನಿರ್ಣಯಿಸಲಾಯಿತು.

2) ಡಾ.ರಾಜೇಂದ್ರ ಆರ್., ಡಾ. ಬಿಷ್ಟಪ್ಪ ಹನುಮಂತಪ್ಪ ತಳವಾರ್, ಮೇಜರ್ ಡಾ. ರಾಘವ ಬಿ. ಮತ್ತು ಡಾ. ತಿಪ್ಪೇಸ್ವಾಮಿ ಇ. ಇವರ ವರ್ಗಾವಣೆ ಬಗ್ಗೆ, ದಿನಾಂಕ 16.04.2025 ರ ಪತ್ರದಲ್ಲಿ ಕೊಡಗು ವಿಶ್ವವಿದ್ಯಾನಿಲಯದ ಕುಲಸಚಿವರು "ಮಾತೃ ವಿಶ್ವವಿದ್ಯಾನಿಲಯದ ಖಾಯಂ ಸಿಬ್ಬಂದಿಗಳ ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಂಡಿಲ್ಲದ ಕಾರಣ ಸದ್ರಿಯವರಿಗೆ ನಿರಪೇಕ್ಷಣಾ ಪತ್ರವನ್ನು ನೀಡಲು ಸಾಧ್ಯವಿರುವುದಿಲ್ಲ ಎಂದು ತಿಳಿಸಿರುತ್ತಾರೆ". ಆದುದರಿಂದ ಈ ವಿಷಯಕ್ಕೆ ಸಂಬಂಧಪಟ್ಟಂತೆ ಮುಂದಿನ ಸಿಂಡಿಕೇಟು ಸಭೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲು ನಿರ್ಣಯಿಸಲಾಯಿತು.

3) 2022-23ನೇ ಸಾಲಿನಲ್ಲಿ ನಿವೃತ್ತರಾದ ಸಿಬ್ಬಂದಿಗಳಿಗೆ ಬಾಕಿ ಇರುವ ಉಪದಾನವನ್ನು ಶೀಘ್ರವಾಗಿ ಬಿಡುಗಡೆಗೊಳಿಸುವ ಬಗ್ಗೆ ಡಾ.ಕೆ.ಸಿ. ಮಹದೇಶರವರು ನೀಡಿದ ಸಲಹೆಯನ್ನು ಪರಿಗಣಿಸಲು ನಿರ್ಧರಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

ಸಹಿ/- ಸಹಿ/-

**ಕುಲಸಚಿವರು** **ಕುಲಪತಿಯವರು**